# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -144ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಸಿದ್ಧಾಪುರ ವಾರ್ಡ್-144 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ನರಸಾರಾಮ್‌ರಾವ್ ಬಿ.ಎಲ್, ಮುಖ್ಯ ಅಭಿಯಂತರರು (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:21/05/2022 ರಂದು ಶನಿವಾರದಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಟಿ. ಮರಿಯಪ್ಪ ರಸ್ತೆಯಲ್ಲಿರುವ ವಾರ್ಡ್ ಕಛೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಶ್ರೀ. ನರಸಾರಾಮಾ ರಾವ್ ಬಿ.ಎಲ್. ಮುಖ್ಯ ಅಭಿಯಂತರರು (ದಕ್ಷಿಣ)
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್-144.
3. ಶ್ರೀ. ಪವನ್‌ಕುಮಾರ್ ಕೆ.ಎಸ್.ಡಿ.ಬಿ ಇಲಾಖೆ.
4. ಶ್ರೀ. ಕೆ.ಬಿ. ಮಂಜುನಾಥ್, ಕೆಲಸ ಪರಿವೀಕ್ಷಕರು ಬೆಂ.ನೀ.ಸ ಮತ್ತು ಒ.ಮಂ.
5. ಶ್ರೀ. ಚೇತನ್ ಆರ್., ಕೆಲಸ ಪರಿವೀಕ್ಷಕರು ಬೆಂ.ನೀ.ಸ ಮತ್ತು ಒ.ಮಂ.
6. ಶ್ರೀಮತಿ. ಸುರೇಖ ಆರ್. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ 144.
7. ಶ್ರೀ. ಎಂ.ಎಂ. ಬಾಬು, ಕಂದಾಯ ಪರಿವೀಕ್ಷಕರು, ವಾರ್ಡ್-144.
8. ಶ್ರೀ. ಕೆ. ಎಲ್. ನಾಗರಾಜ, ಸಹಾಯಕ ಅಭಿಯಂತರರು ಬೆಸ್ಕಾಂ.
9. ಹಾಗೂ ಸಾರ್ವಜನಿಕರು.

*********

1. ಶ್ರೀ. ಸುರೇಶ್ ರವರು ಮಾತನಾಡಿ ಹೊಂಬೇಗೌಡನಗರ ಸ್ಲಂನಲ್ಲಿರುವ ಅಂಬೇಡ್ಕರ್ ಭವನದ ಒಳಭಾಗದಲ್ಲಿ ಅಹಿತಕರ ಚಟುವಟಿಕೆಗಳು ನಡೆಯುತ್ತಿರುವುದಾಗಿ ಸಭೆಯಲ್ಲಿ ದೂರಿದರು. ಇದರ ಹಿನ್ನೆಲೆಯಾಗಿ ಸದರಿ ಸಭೆಯಲ್ಲಿ ಹಾಜರಿದ್ದ ಶ್ರೀ. ಪವನ್‌ಕುಮಾರ್ ಕೆ.ಎಸ್.ಡಿ.ಬಿ ಇಲಾಖೆಯವರಿಗೆ ಕ್ರಮ ವಹಿಸಲು ನೋಡಲ್ ಅಧಿಕಾರಿಯವರು ಸೂಚಿಸಿದರು.

2. ಶ್ರೀ. ಸುಮಂತ್ ರವರು ಮಾತನಾಡಿ ಸಿದ್ದಾಪುರ ಪೂಜಮ್ಮ ರಸ್ತೆಯ ನೀರಿನ ಮತ್ತು ಒಳಚರಂಡಿಯ ಕೊಳವೆಗಳನ್ನು ಹೊಸದಾಗಿ ಅಳವಡಿಸಲು ಸಾಕಷ್ಟು ಭಾರಿ ಪತ್ರದ ಮೂಲಕ ಹಾಗೂ ಮೌಖಿಕವಾಗಿ ತಿಳಿಸಿದರೂ ಸಹ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ಯಾವುದೇ ಕ್ರಮ ವಹಿಸಿರುವುದಿಲ್ಲವೆಂದು ತಿಳಿಸಿದರು. ಸಭೆಯಲ್ಲಿ ಹಾಜರಿದ್ದ BWSSB ಕೆಲಸ ಪರಿವೀಕ್ಷಕರು ಹಿರಿಯ ಅಧಿಕಾರಿಯವರಿಗೆ ಸದರಿ ವಿಷಯದ ಬಗ್ಗೆ ತಿಳಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಯಲ್ಲಿ ತಿಳಿಸಿದರು.



Scanned with CamScanner

3. ಯಲ್ಲಮ್ಮ ದೇವಸ್ಥಾನದ ನಿರ್ದೇಶಕರಾದ ಶ್ರೀ. ಸುರೇಶ್ ರವರು ಮಾತನಾಡಿ ಸಿದ್ದಾಪುರ ರಸ್ತೆಯ ಪ್ರವೇಶ ದ್ವಾರದಲ್ಲಿ ಎಡ ಮತ್ತು ಬಲ ಭಾಗದ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಕೋರಿದರು. ಈ ವಿಷಯಕ್ಕೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರು ಒಪ್ಪಿಗೆ ವ್ಯಕ್ತ ಪಡಿಸಿದರು. ಹಾಗೂ ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿಪಡಿಸಲು ಆರ್ಥಿಕ ನೆರವು ಇಲ್ಲದ ಕಾರಣ ಸದರಿ ದೇವಸ್ಥಾನವನ್ನು ಮುಜರಾಯಿ ಇಲಾಖೆಗೆ ವರ್ಗಾಯಿಸಲು ಶ್ರೀ. ಸುರೇಶ್ ರವರು ನೋಡಲ್ ಅಧಿಕಾರಿಯವರಿಗೆ ಮನವರಿಕೆ ಮಾಡಿದರು. ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರು ಸದರಿ ದೇವಸ್ಥಾನವನ್ನು ಮುಜರಾಯಿ ಇಲಾಖೆಗೆ ವರ್ಗಾಯಿಸುವ ವಿಚಾರದಲ್ಲಿ ವಿರೋಧ ವ್ಯಕ್ತಪಡಿಸಿದರು. ಇದರ ಹಿನ್ನೆಲೆಯಲ್ಲಿ ನೋಡಲ್ ಅಧಿಕಾರಿಯವರು ಹಾಗೂ ವಾರ್ಡಿನ ಸಹಾಯಕ ಅಭಿಯಂತರರು ಮಾತನಾಡಿ ದೇವಸ್ಥಾನದ ಯಥಾಸ್ಥಿತಿಯನ್ನು ಕಾಯ್ದುಕೊಳ್ಳಲು ತಿಳಿಸಿದರು.

4. ಶ್ರೀ. ಮಂಜುನಾಥ್ ರವರು ಮಾತನಾಡಿ ಸಿದ್ದಾಪುರ ರಸ್ತೆಯ ಪ್ರವೇಶ ದ್ವಾರದಲ್ಲಿ ಎಡ ಮತ್ತು ಬಲ ಭಾಗದ ಪಾಲಿಕೆಯ ಸ್ವತ್ತು ಮತ್ತು ರಸ್ತೆಯನ್ನು ಒತ್ತುವರಿ ಮಾಡಿಕೊಂಡು ಹಾಕಿರುವ ನರ್ಸರಿಯ ಗಿಡಗಳನ್ನು ತೆರವುಗೊಳಿಸಲು ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಕೂಡಲೇ ಪರಿಶೀಲಿಸಿ ಸದರಿ ವಿಷಯದ ಬಗ್ಗೆ ಕ್ರಮ ವಹಿಸಲು ವಾರ್ಡಿನ ಅಭಿಯಂತರರಿಗೆ ಸೂಚಿಸಿದರು.

5. ಶ್ರೀ. ಕೆಂಪರಾಜ್ ರವರು ಮಾತನಾಡಿ ಹೊಂಬೇಗೌಡ ಸ್ಲಂ ಹತ್ತಿರ ಹಾಕಿರುವ ಘನತ್ಯಾಜ್ಯವನ್ನು ತೆರವುಗೊಳಿಸಲು ಹಾಗೂ ನಿಂತಿರುವ ಘನತ್ಯಾಜ್ಯದ ವಾಹನಗಳನ್ನು ತೆರವುಗೊಳಿಸಲು ತಿಳಿಸಿದರು. ಇದರ ಹಿನ್ನೆಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಈ ಬಗ್ಗೆ ಕ್ರಮ ವಹಿಸಲು ನೋಡಲ್ ಅಧಿಕಾರಿಯವರು ಸೂಚನೆ ನೀಡಿದರು.

6. ಶ್ರೀ. ಅಜ್ಮಲ್ ರವರು ಮಾತನಾಡಿ ಕೆ.ಎಂ. ಕಾಲೋನಿ ಹಾಗೂ ಅರೆಕೆಂಪನಹಳ್ಳಿ 2ನೇ ಅಡ್ಡರಸ್ತೆಯಲ್ಲಿ ಹಾಳಾಗಿರುವ ಆರ್.ಸಿ.ಸಿ ಸ್ಲ್ಯಾಬ್‌ಗಳನ್ನು ಸರಿಪಡಿಸಲು, ಟಿ. ಮರಿಯಪ್ಪ ರಸ್ತೆಯಲ್ಲಿ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದಿಂದ ಮುಚ್ಚಿರುವ ಕೊಳವೆಬಾವಿಗಳನ್ನು ತೆರವುಗೊಳಿಸಲು ಹಾಗೂ ಕೊಳಚೆ ಪ್ರದೇಶದಲ್ಲಿ ಹಾಳಾಗಿರುವ ಟೈಲ್ಸ್‌ಗಳನ್ನು ಸರಿಪಡಿಸಲು ಮತ್ತು ಬೆಸ್ಕಾಂ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ವಾರ್ಡ್ ಪ್ರದೇಶದಲ್ಲಿ ಸರಿಯಾದ ರೀತಿಯಲ್ಲಿ ಕಾಮಗಾರಿ ನಿರ್ವಹಿಸಲು ಸಭೆಯಲ್ಲಿ ದೂರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟವರಿಗೆ ಕ್ರಮ ವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.



Scanned with CamScanner

7. ಶ್ರೀ. ಅಶೋಕ್ ರವರು ಮಾತನಾಡಿ ಕೆ.ಹೆಚ್.ಬಿ ಕ್ವಾಟ್ರಸ್‌ನ ನಿವಾಸಿಗಳಿಗೆ ನೀಡಿರುವ ಹಕ್ಕುಪತ್ರಗಳನ್ನು ಪರಿಶೀಲಿಸಲು, ಬೆಸ್ಕಾಂ ಇಲಾಖೆಯವರು ಸಿದ್ಧಾಪುರ ಮುಖ್ಯರಸ್ತೆಯ ಬಲಭಾಗದಲ್ಲಿ ಹಾಕಿರುವ ಕೇಬಲ್‌ಗಳನ್ನು ತೆರವುಗೊಳಿಸಲು, ಹೊಂಬೇಗೌಡ ಸ್ಲಂನಲ್ಲಿ ಸುಮಾರು ವರ್ಷಗಳ ಹಿಂದೆ ಆರ್.ಓ ಪ್ಲಾಂಟಿನ ಕಾಮಗಾರಿ ಪೂರ್ಣಗೊಂಡಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟವರಿಗೆ ಕ್ರಮ ವಹಿಸಲು ಸೂಚಿಸುವುದಾಗಿ ಸಭೆಯಲ್ಲಿ ತಿಳಿಸಿದರು.
8. ಶ್ರೀ. ಮಂಜುನಾಥ್ ರವರು ಮಾತನಾಡಿ ಟಿ. ಮರಿಯಪ್ಪ ರಸ್ತೆಯಲ್ಲಿ ಮಳೆಗಾಲದ ಸಮಯದಲ್ಲಿ ಹೆಚ್ಚಾಗಿ ನೀರು ಹರಿದು ಮುರಳಿ ಸ್ಲಂನ ತಗ್ಗು ಪ್ರದೇಶದ ನಿವಾಸಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು. ಕಾರಣ ಪಾಲಿಕೆಯ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದವರು ಮಳೆ ನೀರು ಚರಂಡಿಯನ್ನು ಸಮರ್ಪಕವಾಗಿ ನಿರ್ಮಾಣ ಮಾಡದೆ ಇರುವುದರಿಂದ ಈ ಸಮಸ್ಯೆ ಉಂಟಾಗುತ್ತಿದೆ ಎಂದು ದೂರಿದರು. ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದಲ್ಲಿ ಸಭೆಗೆ ಹಾಜರಾಗದ ಹಿನ್ನೆಲೆಯಲ್ಲಿ ಮುಂದಿನ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ ಕ್ರಮ ವಹಿಸಲಾಗುವುದೆಂದು ನೋಡಲ್ ಅಧಿಕಾರಿಯವರು ತಿಳಿಸಿದರು.
9. ಶ್ರೀ. ಜಯರಾಮ್ ರವರು ಮಾತನಾಡಿ ಪಾಲಿಕೆ ವತಿಯಿಂದ ಗುಟ್ಟೇಪಾಳ್ಯದ 6ನೇ ಅಡ್ಡರಸ್ತೆಯಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳಾದ ನೀರು, ಒಳಚರಂಡಿ ಹಾಗೂ ಕಾಂಕ್ರೀಟ್ ರಸ್ತೆಗಳನ್ನು ಸಮರ್ಪಕವಾಗಿ ನಿರ್ವಹಿಸಿರುವುದು ಸಾರ್ವಜನಿಕರಿಗೆ ಸಂತಸ ತಂದಿರುವುದರಿಂದ ಅಭಿನಂದನೆಯನ್ನು ವ್ಯಕ್ತಪಡಿಸಿದರು.
10. 2022–23ನೇ ಸಾಲಿನ ಆಯವ್ಯಯ ಅನುಮೋದನೆಗೊಂಡಿದ್ದು, ವಾರ್ಡ್ ನಿರ್ವಹಣೆಗಾಗಿ ರೂ.30.00 ಲಕ್ಷಗಳ Annual maintenance and improvements of footpath and drains in ward No.144. ಈ ಕಾಮಗಾರಿಯು ಅತ್ಯವಶ್ಯಕವಾಗಿರುವುದರಿಂದ ತುರ್ತಾಗಿ ಅಂದಾಜು ಪಟ್ಟಿಯನ್ನು ತಯಾರಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಟೆಂಡರ್ ಕರೆಯಲು ಹಾಗೂ ಕಾರ್ಯಾದೇಶ ನೀಡಲು ಕಾರ್ಯಪಾಲಕ ಅಭಿಯಂತರರಿಗೆ ಕೋರಲು ವಾರ್ಡ್ ಸಮಿತಿಯ ಎಲ್ಲಾ ಸದಸ್ಯಗಳು ಹಾಗೂ ಅಧಿಕಾರಿಗಳು ವಾರ್ಡ್ ಸಮಿತಿಯಲ್ಲಿ ಒಮ್ಮತದಿಂದ ತೀರ್ಮಾನಿಸಲಾಯಿತು..

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

AO 21/5/2022

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner